Akashvani : Bangalore
Regional Bulletin In Kannada
17.03.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನಾಳೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭ; ವಿಧಾನಸಭೆಯಲ್ಲಿ ವಿದ್ಯಾರ್ಥಿಗಳಿಗೆ ಶುಭ ಕೋರಿದ ಮುಖ್ಯಮಂತ್ರಿ
- ರಾಜ್ಯದ ನೀರಾವರಿ ಯೋಜನೆಗಳ ಅಡೆತಡೆ ನಿವಾರಣೆ ಕುರಿತಂತೆ ನವದೆಹಲಿಯಲ್ಲಿ ಹಿರಿಯ ವಕೀಲರೊಂದಿಗೆ ಸರ್ಕಾರ ಚರ್ಚೆ
- ರಾಯಚೂರು ಜಿಲ್ಲೆಯಲ್ಲಿ ಕೆಎಸ್‌ಆರ್‌ಪಿ ಪಡೆ ಸ್ಥಾಪಿಸುವ ಕುರಿತಂತೆ ಪರಿಶೀಲನೆ- ವಿಧಾನಸಭೆಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ
- ಬೆಳಗಾವಿಯಲ್ಲಿ ಐಟಿ-ಸೆಮಿಕಂಡಕ್ಟರ್ ಪಾರ್ಕ್ ಸ್ಥಾಪಿಸಲು ಕ್ರಮ- ಸಚಿವ ಪ್ರಿಯಾಂಕ್ ಖರ್ಗೆ
- ರಾಜ್ಯದ ಹಲವೆಡೆ ಆಲಿಕಲ್ಲು ಸಹಿತ ಮಳೆ; ಬಿಸಿಲ ಬೇಗೆಗೆ ತಂಪೆರೆದ ವರುಣ

***************

ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದ ಅತೀ ಪ್ರಮುಖ ಘಟ್ಟವಾಗಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಾಳೆಯಿಂದ ರಾಜ್ಯದಾದ್ಯಂತ ಆರಂಭವಾಗಲಿದೆ. ಶಿಕ್ಷಣ ಇಲಾಖೆ ಅತ್ಯಂತ ಪಾರದರ್ಶಕತೆಯಿಂದ ಪರೀಕ್ಷೆ ನಡೆಸಲು ಸಿದ್ಧತೆ ಮಾಡಿಕೊಂಡಿದೆ. ರಾಜ್ಯದಲ್ಲಿ ಒಟ್ಟು ೮ ಲಕ್ಷ ೬೫ ಸಾವಿರದ ೯೮೮ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಸಿಸಿಟಿವಿ ಕಣ್ಗಾವಲಿನಲ್ಲಿ ಭದ್ರತೆಯೊಂದಿಗೆ ಪರೀಕ್ಷೆಗಳು ನಡೆಯಲಿವೆ. ವಿದ್ಯಾರ್ಥಿಗಳಿಗೆ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರವೇಶ ಪತ್ರ ತೋರಿಸಿದರೆ, ಉಚಿತವಾಗಿ ಪಯಾಣಿಸಬಹುದಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಪರೀಕ್ಷೆ ಸುಗಮವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಬೈಲಾಂಜಿನಪ್ಪ ತಿಳಿಸಿದ್ದಾರೆ.

ದಾವಣಗೆರೆ ಜಿಲ್ಲೆಯ ೪೭೬ ಶಾಲೆಗಳಿಂದ ಒಟ್ಟು ೨೧ ಸಾವಿರದ ೭೬೫ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ. ಎಲ್ಲಾ ೮೧ ಪರೀಕ್ಷಾ ಕೇಂದ್ರಗಳಲ್ಲಿ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

ಕೋಲಾರ ಜಿಲ್ಲೆಯಲ್ಲಿ ಒಟ್ಟು ೧೯ ಸಾವಿರದ ೪೭೪ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುತ್ತಿದ್ದು, ೬೫ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್ .ರವಿ ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಒಟ್ಟು ೧೦೫ ಪರೀಕ್ಷಾ ಕೇಂದ್ರಗಳಿದ್ದು, ಒಟ್ಟು ೨೯ ಸಾವಿರದ ೫೬೮ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

***************

ನಾಳೆಯಿಂದ ನಡೆಯಲಿರುವ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಬರೆಯುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ವಿಧಾನಸಭೆಯಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಶಾಲಾ ಶಿಕ್ಷಣ ಸಚಿವ ಮಧುಬಂಗಾರಪ್ಪ, ಪ್ರತಿಪಕ್ಷದ ನಾಯಕ ಆರ್.ಅಶೋಕ ಹಾಗೂ ವಿಧಾನಪರಿಷತ್‌ನ ಉಪಸಭಾಪತಿ ಶುಭ ಹಾರೈಸಿದ್ದಾರೆ.

ಪರೀಕ್ಷೆ ಬರೆಯುತ್ತಿರುವ ಒಟ್ಟು ೮ ಲಕ್ಷ ೬೫ ಸಾವಿರದ ೯೮೮ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಹಾಗೂ ವೈಯಕ್ತಿಕವಾಗಿ ಮುಖ್ಯಮಂತ್ರಿ ಶುಭ ಹಾರೈಸಿದ್ದಾರೆ. ವಿದ್ಯಾರ್ಥಿಗಳು ಯಾವುದೇ ಆತಂಕ, ಭಯವಿಲ್ಲದೆ ಪರೀಕ್ಷೆ ಎದುರಿಸಬೇಕು ಎಂದು ವಿದ್ಯಾರ್ಥಿಗಳಿಗೆ ಧೈರ್ಯ ತುಂಬಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಮಾತನಾಡಿದ ಉಪಸಭಾಪತಿಗಳು, "ಪರೀಕ್ಷೆ ಎಂದರೆ ಯುದ್ಧವಲ್ಲ, ವಿದ್ಯಾರ್ಥಿಗಳು ತಾವು ಓದಿದ್ದನ್ನು ಬರೆಯುವ ಒಂದು ವೇದಿಕೆ. ಯಾವುದೇ ಭಯವಿಲ್ಲದೆ, ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ" ಎಂದು ಇಡೀ ಸದನದ ಪರವಾಗಿ ವಿದ್ಯಾರ್ಥಿಗಳಿಗೆ ಶುಭಕೋರಿದರು.

***************

ಕೃಷ್ಣಾ ಮೇಲ್ದಂಡೆ ಯೋಜನೆ, ಮಹದಾಯಿ, ತುಂಗಭದ್ರಾ, ಮೇಕೆದಾಟು ಮತ್ತಿತರ ಯೋಜನೆಗಳ ಅಡೆತಡೆ ನಿವಾರಣೆಗೆ ಕೈಗೊಳ್ಳಬೇಕಾದ ಕಾನೂನು ಕ್ರಮಗಳ ಬಗ್ಗೆ ದೆಹಲಿಯ ಕರ್ನಾಟಕ ಭವನದಲ್ಲಿ ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರ್ನಾಟಕ ಪರ ವಕೀಲರೊಂದಿಗೆ ಚರ್ಚೆ ನಡೆಸಿದ್ದಾರೆ.

ಈ ಸಂದರ್ಭದಲ್ಲಿ ಸಚಿವರಾದ ಎಚ್.ಕೆ.ಪಾಟೀಲ್, ಎಂ.ಬಿಪಾಟೀಲ್, ಬೋಸರಾಜು, ದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ, ರಾಜ್ಯ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ನಿವೃತ್ತ ನ್ಯಾಯಮೂರ್ತಿ ನಾಗಮೋಹನ ದಾಸ್, ಸುಪ್ರೀಂ ಕೋರ್ಟ್ ವಕೀಲರಾದ ಮೋಹನ್ ಕಾತರಕಿ, ನಿಶಾಂತ್ ಪಾಟೀಲ್, ಮಯಾಂಕ್ ಜೈನ್, ಅಪರ ಮುಖ್ಯ ಕಾರ್ಯದರ್ಶಿಗಳಾದ ಗೌರವ್ ಗುಪ್ತಾ, ತುಷಾರ್ ಗಿರಿನಾಥ್ ಮತ್ತಿತರ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.

***************

ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿಂದು ಮಸ್ಕಿ ಕ್ಷೇತ್ರದ ಶಾಸಕ ಬಸನಗೌಡ ತುರುವಿಹಾಳ್ ಅವರ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ಅಗತ್ಯತೆ ಆಧಾರದ ಮೇಲೆ ರಾಯಚೂರು ಜಿಲ್ಲೆಯಲ್ಲಿ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸಲಾಗುವುದು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆ.ಎಸ್.ಆರ್.ಪಿ ಪಡೆ ಅಗತ್ಯವಿದ್ದು, ೧೭೫ ಎಕರೆ ಜಾಗವನ್ನು ಹಾಗೂ ಕೆ.ಕೆ.ಆರ್.ಡಿ.ಬಿಯ ಅನುದಾನವನ್ನು ನೀಡಲಾಗುವುದು ಎಂದು ಹೇಳಿದ್ದಾರೆ.

ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ೧೨ ಕೆ.ಎಸ್.ಆರ್.ಪಿ ಪಡೆಗಳು ಕಾರ್ಯನಿರ್ವಹಿಸುತ್ತಿವೆ. ರಾಯಚೂರು ಭಾಗದಲ್ಲಿ ವಿಶ್ವಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳು, ಅಣೆಕಟ್ಟುಗಳು, ಗಡಿಭಾಗಗಳು ಇರುವುದರಿಂದ ಈ ಕುರಿತು ಪರಿಶೀಲಿಸಿ, ಆರ್ಥಿಕ ಇಲಾಖೆಗೆ ಈಗಾಗಲೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯದ ಎರಡನೇ ರಾಜಧಾನಿಯೆಂದೇ ಘೋಷಣೆಗೊಂಡಿರುವ ಹಾಗೂ ಗಡಿ ಜಿಲ್ಲೆಯಾದ ಬೆಳಗಾವಿಯಲ್ಲಿ ಐ.ಟಿ ಪಾರ್ಕ್, ಸೆಮಿಕಂಡಕ್ಟರ್ ಪಾರ್ಕ್‌ಗಳನ್ನು ನಿರ್ಮಿಸಲಾಗುವುದು ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಈ ಮೂಲಕ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆ ಎಂದು ಹೇಳಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದ ವೇಳೆಯಲ್ಲಿ ಸದಸ್ಯರಾದ ಅಭಯ್ ಪಾಟೀಲ್, ಬೆಳಗಾವಿಯಲ್ಲಿ ಐಟಿ ಪಾರ್ಕ್ ಮತ್ತು ಸೆಮಿಕಂಡಕ್ಟರ್ ಪಾರ್ಕ್‌ಗಳನ್ನು ನಿರ್ಮಿಸಿ ಅಭಿವೃದ್ಧಿಪರ

ರಾಜ್ಯವನ್ನಾಗಿ ಮಾಡಬೇಕು ಹಾಗೂ ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಬೇಕೆಂದು ಮನವಿ ಮಾಡಿದರು.

ಇದಕ್ಕೆ ಉತ್ತರಿಸಿದ ಸಚಿವರು, ಉದ್ದೇಶಿತ ಜಮೀನನ್ನು ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸುವ ಸಲುವಾಗಿ ೨೦೨೧ರಲ್ಲಿ ರಕ್ಷಣಾ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀದಿಗೆ ಒಪ್ಪಂದ ಮಾಡಿಕೊಳ್ಳಲು ಮುಖ್ಯಮಂತ್ರಿಗೆ ಮನವಿ ಮಾಡಲಾಗುವುದು ಎಂದು ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿ ಇಂದು ಸದಸ್ಯ ರವಿಕುಮಾರ್ ಹಾಗೂ ಇತರ ಸದಸ್ಯರು ನಿಯಮ ೩೩೦ರಡಿಯಲ್ಲಿ ನೀಡಿದ್ದ ಸೂಚನೆಗೆ ಉತ್ತರಿಸಿದ ಸಚಿವರು, ಕೇಂದ್ರ ಸರ್ಕಾರ ಸಕ್ಕರೆಯ ಎಂಎಸ್‌ಪಿ ದರ ಹೆಚ್ಚಳ ಮಾಡಿದರೆ ಸಕ್ಕರೆ ಕಾರ್ಖಾನೆಗಳು ಹಾಗೂ ಕಬ್ಬು ಬೆಳೆಗಾರರ ಬಹುತೇಕ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರ ಸಕ್ಕರೆ ರಫ್ತು ಮಾಡಲು ಅವಕಾಶ ನೀಡಬೇಕು. ಎಥೆನಾಲ್ ದರ ಪರಿಷ್ಕರಣೆ ಹಾಗೂ ಉತ್ಪಾದನಾ ಪ್ರಮಾಣಕ್ಕೆ ಅನುಗುಣವಾಗಿ ದರ ಹಂಚಿಕೆ ಮಾಡಬೇಕು ಎಂದು ತಿಳಿಸಿದ್ದಾರೆ.

***************

ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಕೆಗೆ ತಾತ್ಕಾಲಿಕ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮೇಲ್ಮನೆಯಲ್ಲಿ ಇಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಶರಣಗೌಡ ಬಯ್ಯಾಪುರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಯಚೂರು ಜಿಲ್ಲೆಯ ಮುದಗಲ್ ಪಟ್ಟಣದಲ್ಲಿ ಕುಡಿಯುವ ನೀರಿನ ಪೂರೈಕೆ ಯೋಜನೆಯ ಬಾಕಿ ಇರುವ ಕಾಮಗಾರಿಗಳಿಗೆ ಇನ್ನೂ ೩೫.೪೫ ಕೋಟಿ ರೂಪಾಯಿಗಳ ಅಗತ್ಯವಿದೆ ಎಂದು ತಿಳಿಸಿದರು.

೨೦೧೩ ರಿಂದ ಈವರೆಗೆ ಕುಡಿಯುವ ನೀರು ಮತ್ತು ಒಳಚರಂಡಿ ಯೋಜನೆಗಳಿಗೆಂದು ಸುಮಾರು ೧೫ ಸಾವಿರ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗಿದೆ. ಬಹುತೇಕ ನಗರ ಪ್ರದೇಶಗಳಲ್ಲಿ ಕಾಮಗಾರಿಗಳು ವಿವಿಧ ಹಂತಗಳಲ್ಲಿವೆ ಎಂದು ಸಚಿವರು ಸದನದ ಗಮನಕ್ಕೆ ತಂದರು.

ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಟ್ಯಾಂಕರ್‌ಗಳು, ಖಾಸಗಿ ಬೋರ್‌ವೆಲ್‌ಗಳು ಸೇರಿದಂತೆ ಇನ್ನಿತರ ಜಲಮೂಲಗಳಿಂದ ತಾತ್ಕಾಲಿಕವಾಗಿ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

***************

ಗಡಿಜಿಲ್ಲೆ ಚಾಮರಾಜನಗರದಲ್ಲಿ ಇಂದು ಒಂದು ತಾಸಿಗೂ ಅಧಿಕ ಕಾಲ ಮಳೆಯಾಗಿದ್ದು ಬಿಸಿಲಿನಿಂದ ತತ್ತರಿಸಿದ್ದ ಇಳೆ ತಂಪಾಗಿದೆ. ಆದರೆ, ಭಾರೀ ಆಲಿಕಲ್ಲು ಮಳೆಯಿಂದ ರೈತರು ಕಂಗಲಾಗಿದ್ದಾರೆ.

ಚಾಮರಾಜನಗರ ತಾಲೂಕಿನ ಉಡಿಗಾಲ, ನಂಜೇದೇವನಪುರ, ಮರಿಯಾಲ, ಉತ್ತುವಳ್ಳಿ ಭಾಗದಲ್ಲಿ ಒಂದು ತಾಸಿಗೂ ಅಧಿಕ ಕಾಲ ಮಳೆಯಾಗಿದೆ. ಜಮೀನಿನ ತುಂಬೆಲ್ಲಾ ಆಲಿಕಲ್ಲು ಬಿದ್ದಿದ್ದು, ಜನವಸತಿ ಪ್ರದೇಶಗಳಲ್ಲಿ ಬಿದ್ದ ಆಲಿಕಲ್ಲು ಮಳೆಯಿಂದ ಜನರು ಆತಂಕಗೊಂಡಿದ್ದಾರೆ.

ಬೆಳಗಾವಿಯಲ್ಲಿಯೂ ಇಂದು ಸುರಿದ ಆಲಿಕಲ್ಲು ಸಹಿತ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ಥಗೊಂಡಿತ್ತು.

ಬೆಂಗಳೂರಿನಲ್ಲಿ ಹಲವೆಡೆಯೂ ತುಂತುರು ಮಳೆಯಾಗಿದೆ.

***************

ರಾಜ್ಯದಲ್ಲಿ ಇರುವುದು ಅಭಿವೃದ್ಧಿ ಶೂನ್ಯ ಕಾಂಗ್ರೆಸ್ ಸರ್ಕಾರ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಕೇಂದ್ರ ಸರ್ಕಾರ ನೀಡಿದ ಅನುದಾನವನ್ನೂ ಸಕಾಲಕ್ಕೆ ಬಳಸಲಾಗದೆ ಮರಳಿ ಕಳುಹಿಸುತ್ತಿದೆ ಎಂದು ದೂರಿದ್ದಾರೆ. ಸಿಟೀಸ್ ೨.೦ ಯೋಜನೆಯಡಿ ನಗರಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದ ಮೊದಲ ಕಂತಿನ ಹಣವನ್ನು ಬಳಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ತೊಲಗುವವರೆಗೂ ಕರ್ನಾಟಕದ ಪ್ರಗತಿ ಸಾಧ್ಯವವೇ ಇಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದಲ್ಲಿ ವಿದ್ಯುತ್ ಪ್ರವಹಿಸಿ ಹುಲಿಯೊಂದು ಸಾವನ್ನಪ್ಪಿದೆ.

ಸ್ಥಳಕ್ಕೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಪ್ರಭಾಕರನ್, ಸೆಸ್ಕ್ ಅಧಿಕಾರಿಗಳು ಮತ್ತು ತೆರಕಣಾಂಬಿ ಪೊಲೀಸ್ ಠಾಣೆ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಪಡಗೂರು ಗ್ರಾಮದ ಜಮೀನಿನಲ್ಲಿ ಬೆಳೆ ರಕ್ಷಣೆಗಾಗಿ ಅಳವಡಿಸಿದ್ದ ಅಕ್ರಮ ವಿದ್ಯುತ್ ಪ್ರವಹಿಸಿ ಹೆಣ್ಣು ಹುಲಿ ಮೃತಪಟ್ಟಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ ಹಲವು ದಿನಗಳಿಂದ ಈ ಹುಲಿ ಜಾನುವಾರುಗಳ ಮೇಲೆ ದಾಳಿ ನಡೆಸಿತ್ತು. ಹುಲಿ ಸೆರೆಗೆ ಪಡಗೂರು ಗ್ರಾಮದಲ್ಲಿ ಅರಣ್ಯ ಇಲಾಖೆ ಕೂಡ ಬೋನ್ ಅಳವಡಿಸಿತ್ತು.

***************

ಸಂಕ್ಷಿಪ್ತ ಸುದ್ದಿಗಳು

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಎಲ್‌ಪಿಜಿ ಸಿಲಿಂಡರ್ ಪೂರೈಕೆಯಲ್ಲಿ ಸಾರ್ವಜನಿಕ ಕುಂದುಕೊರತೆಗಳು ಕಂಡು ಬಂದಲ್ಲಿ ಆಹಾರ ಶಾಖೆಯ ಆಹಾರ ನಿರೀಕ್ಷಕರನ್ನು ದೂರವಾಣಿ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ತಿಳಿಸಿದ್ದಾರೆ.

೨. ಬಳ್ಳಾರಿಯಲ್ಲಿ ನಾಳೆ ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್ ಮತ್ತು ಮಾನವ ಅಂಗಾಂಗ ದಾನದ ಜಾಗೃತಿ ವಾಕಥಾನ್ ಹಮ್ಮಿಕೊಳ್ಳಲಾಗಿದೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಾಕಥಾನ್‌ಗೆ ಚಾಲನೆ ನೀಡಲಿದ್ದಾರೆ.

೩. ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಮಹಿಳಾ ಅಧ್ಯಯನ ಕೇಂದ್ರದ ವತಿಯಿಂದ ನಾಳೆ ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಹಿರಿಯ ವಿಜ್ಞಾನಿ ಡಾ.ಶುಭ ವಿ. ಅಯ್ಯಂಗಾರ್ ಸಮಾರಂಭ ಉದ್ಘಾಟಿಸಲಿದ್ದಾರೆ.

೪. ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಕೊಪ್ಪಳ ಜಿಲ್ಲೆಯ ಗಂಗಾವತಿ, ಕುಷ್ಟಗಿ ಹಾಗೂ ಯಲಬುರ್ಗಾ ನ್ಯಾಯಾಲಯಗಳಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ದೊಡ್ಡ ಪ್ರಮಾಣದಲ್ಲಿ ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥಪಡಿಸಲಾಗಿದೆ. ೭ ಪ್ರಕರಣಗಳಲ್ಲಿ ದಂಪತಿ ತಮ್ಮ ಮನಸ್ತಾಪವನ್ನು ಬಿಟ್ಟು, ಮತ್ತೆ ಒಟ್ಟಿಗೆ ಬಾಳು ನಡೆಸಲು ಒಪ್ಪಿಕೊಂಡಿರುವುದು ವಿಶೇಷವಾಗಿದೆ.

*******ಮುಕ್ತಾಯ********